# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 86 (109) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 27.01.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಬಹಳ ಭಾಗ ಮುಳುಗಡೆಯಾಗಿ ಲಕ್ಷಾಂತರ ಜನರು ಮನೆ ಜಮೀನುಗಳನ್ನು ಕಳೆದುಕೊಂಡು ತಾವು ಮಾಡುತ್ತಿದ್ದ ಉದ್ಯೋಗಗಳನ್ನು ಕೂಡ ಕಳೆದುಕೊಂಡು ನಿರಾಶ್ರಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2013-14 ರಿಂದ ಪ್ರಸ್ತುತದವರೆಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಒಟ್ಟು 142 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.<br><br>ವಿಜಯಪುರ ಜಿಲ್ಲೆಯಲ್ಲಿ ಒಟ್ಟು 90 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.10131.32 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 16716 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. ಇವುಗಳ ಪೈಕಿ 8 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 806.66 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 1593 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. 3 ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿದ್ದು, ಉಳಿದ ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿವೆ.<br><br>ಇದೇ ರೀತಿ ಬಾಗಲಕೋಟೆ ಜಿಲ್ಲೆಯಲ್ಲಿ ಒಟ್ಟು 52 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.11370.85 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು 11805 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. ಇವುಗಳ ಪೈಕಿ 17 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ. 6497.89 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 4806 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. ಉಳಿದ 35 ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿವೆ. |
| ಆ | ನಿರಾಶ್ರಿತರ ಬದುಕಿನ ನಿರ್ವಹಣೆಗಾಗಿ ಉದ್ಯೋಗ ನೀಡುವ ದಿಶೆಯಲ್ಲಿ ಸರ್ಕಾರ ಸಣ್ಣ ದೊಡ್ಡ ಉದ್ಯಮಗಳನ್ನು ಕಾರ್ಖಾನೆಗಳನ್ನು ಸ್ಥಾಪಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ; (ವಿವರ ನೀಡುವುದು) | |

| | | |
|---|---|---|
| ಇ | ಅವಳಿ ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಲೈಮ್ ಸ್ಟೋನ್, ಡೋಲೋಮೈಟ್ ಇತ್ಯಾದಿಗಳ ಖನಿಜ ನಿಕ್ಷೇಪ ತೋಟಗಾರಿಕೆ ಉತ್ಪನ್ನ ಬೆಳೆಯುವಂತಹ ವಿಫಲವಾದ ಪ್ರದೇಶ ಹಾಗೂ ನೇಕಾರಿಕೆ ಅವಲಂಬಿತ ದೊಡ್ಡ ಸಂಖ್ಯೆಯ ಕುಟುಂಬಗಳಿದ್ದು, ಸರ್ಕಾರ ಹಮ್ಮಿಕೊಳ್ಳುವ ಹೂಡಿಕೆ ಆಕರ್ಷಿಸುವ ಜಾಗತಿಕ ಸಮಾವೇಶಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಕಾರ್ಯಕ್ರಮ ರೂಪಿಸಿದೆಯೇ (ಮಾಹಿತಿ ನೀಡುವುದು) | ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗೆ ದೊಡ್ಡ ಉದ್ಯಮಗಳನ್ನು ಆಕರ್ಷಿಸಲು ದೇಶ ಹಾಗೂ ವಿದೇಶಗಳಲ್ಲಿ ಸಭೆಗಳನ್ನು ನಡೆಸಿದಾಗ, ಜಿಲ್ಲೆಗಳಲ್ಲಿ ಲಭ್ಯವಿರುವ ಅವಕಾಶಗಳ ಬಗ್ಗೆ ಕೈಗಾರಿಕೋದ್ಯಮಿಗಳಿಗೆ ವಿವರಿಸಲಾಗುತ್ತಿದೆ.<br><br>ಕೈಗಾರಿಕಾ ನೀತಿ – 2025-30 ರಡಿ ಈ ಎರಡೂ ಜಿಲ್ಲೆಗಳ ತಾಲ್ಲೂಕುಗಳನ್ನು ಅತೀ ಹಿಂದುಳಿದ ತಾಲ್ಲೂಕುಗಳೆಂದು ವರ್ಗೀಕರಿಸಿ, ಹೆಚ್ಚಿನ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ಒದಗಿಸಲಾಗುತ್ತಿದೆ. |

**ಕಡತ ಸಂಖ್ಯೆ ಸಿಐ 21 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು